15 41

**ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಮಂಜುನಾಥ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ಇವರು ನಿಯಮ 72ರ ಅಡಿಯಲ್ಲಿ ಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ**

**ವಿಷಯ :-** 1980 ಡಿ.30 ರಂದು ಅಂದಿನ ಮುಖ್ಯಮಂತ್ರಿ ಆರ್.ಗುಂಡೂರಾವ್ ಅವರು ನೀರಾವರಿ ಸಚಿವರಾಗಿದ್ದ ಮಲ್ಲಾರಿ ಗೌಡ ಅವರೊಂದಿಗೆ ಸೇರಿ ವರಾಹಿ ಯೋಜನೆಗೆ ಹಾಗೂ ಬ್ರಹ್ಮಾವರ ಸಹಕಾರಿ ಸಕ್ಕರೆ ಕಾರ್ಖಾನೆಗೂ ಒಂದೇ ದಿನ ಶಂಕುಸ್ಥಾಪನೆ ನೆರವೇರಿಸಿದ್ದರು. ವಾರಾಹಿ ನೀರಿನಿಂದ ಉಡುಪಿ ಜಿಲ್ಲೆಯಲ್ಲಿ ಭತ್ತದ ಜತೆಗೆ ಲಾಭದಾಯಕ ಕಬ್ಬು ಬೆಳೆಯುವುದು, ಆ ಕಬ್ಬನ್ನು ಬ್ರಹ್ಮಾವರ ಸಕ್ಕರೆ ಕಾರ್ಖಾನೆಗೆ ಪೂರೈಸಿ ಸ್ಥಳೀಯವಾಗಿ ಉದ್ಯೋಗ ಸೃಷ್ಟಿಸುವ ಮಹಾದಾಸೆ ಇದ್ದಿತ್ತು.

44 ವರ್ಷದ ಹಿಂದೆ ವಾರಾಹಿ ನೀರಾವರಿ ಯೋಜನೆ ಬರೀ 9.5 ಕೋಟಿ ವೆಚ್ಚದ ಅಂದಾಜಿನೊಂದಿಗೆ ಆರಂಭವಾಗಿತ್ತು. ಪೂರ್ಣವಾಗದ ಯೋಜನೆಗೆ ಕಾರ್ಖಾನೆಯ ರೂ.1382 ಕೋಟಿ ವೆಚ್ಚ ಮಾಡಲಾಗಿದೆ. ಆದರೆ ಇದುವರೆಗೆ ಶೇ. 50 ರಷ್ಟೂ ಕೆಲಸವಾಗಿಲ್ಲ. ಇನ್ನೂ ಆಘಾತಕರ ಸಂಗತಿಯೆಂದರೆ, ಯೋಜನೆಯ ಡಿಪಿಆರ್ ಅದಲು-ಬದಲಾಗಿದೆ. ಒಟ್ಟಾರೆ ವಾರಾಹಿ ಯೋಜನೆ ಹಾದಿ ತಪ್ಪಿದ್ದು, ಜಿಲ್ಲೆಯ ಆರ್ಥಿಕ ಸ್ಥಿತಿ-ಗತಿ, ಉದ್ಯೋಗ ಕೃಷಿ ವ್ಯವಸ್ಥೆಗೆ ಶಕ್ತಿಯಾಗಬೇಕಿದ್ದ ಈ ಯೋಜನೆಯ ವಿಳಂಬದಿಂದ ಎಲ್ಲವೂ ಉಲ್ಟಾಪಲ್ಟಾ ಆಗಿರುವುದಕ್ಕೆ ಬ್ರಹ್ಮಾವರ ಸಕ್ಕರೆ ಕಾರ್ಖಾನೆ ಮುಚ್ಚಿರುವುದು ಜೀವಂತ ನಿದರ್ಶನವಾಗಿದೆ. ಆದ್ದರಿಂದ "ಉಡುಪಿ ಜಿಲ್ಲೆಯ ರೈತರ ಹಿತದೃಷ್ಟಿಯಿಂದ ವಾರಾಹಿ ಯೋಜನೆಯನ್ನು ಶೀಘ್ರ ಪೂರ್ಣಗೊಳಿಸಿ ಜಿಲ್ಲಾ ಕೃಷಿ ಕ್ಷೇತ್ರಕ್ಕೆ ಯೋಜನೆಯ ಫಲವನ್ನು ತಲುಪಿಸುವ" ವಿಷಯದ ಕುರಿತು ಮಾನ್ಯ ಜಲಸಂಪನ್ಮೂಲ ಇಲಾಖೆಯ ಮಂತ್ರಿಗಳ ಗಮನ ಸೆಳೆಯಲು ಬಯಸುತ್ತೇನೆ.

***

ಕರ್ನಾಟಕ ವಿದ್ಯುತ್ ನಿಗಮದ ಹೊಸಂಗಡಿಯ ಭೂಗರ್ಭ ಜಲ ವಿದ್ಯುತ್ ಶಕ್ತಿ ಉತ್ಪಾದನಾ ಕೇಂದ್ರದಿಂದ ವಿದ್ಯುತ್ ಉತ್ಪಾದನೆ ಬಳಿಕ ಲಭ್ಯವಾಗುವ 1100 ಕ್ಯೂಸೆಕ್ಸ್ ನೀರನ್ನು ಬಳಸಿಕೊಂಡು ಸುಮಾರು 16 ಕಿ.ಮೀ ದೂರದಲ್ಲಿ ಇರುವ ಹೋರಿಯಬ್ಬೆ ಎಂಬಲ್ಲಿ ವಿಯರ್ ನಿರ್ಮಿಸಿ, ಕುಂದಾಪುರ ತಾಲೂಕಿನ 33 ಗ್ರಾಮಗಳು ಹಾಗೂ ಉಡುಪಿ ತಾಲೂಕಿನ 35 ಗ್ರಾಮಗಳ ಒಟ್ಟು ಸುಮಾರು 15,702 ಹೆಕ್ಟೇರ್ ಪ್ರದೇಶಕ್ಕೆ ನೀರಾವರಿ ಸೌಲಭ್ಯವನ್ನು ಒದಗಿಸುವ ಉದ್ದೇಶದೊಂದಿಗೆ ವಾರಾಹಿ ನೀರಾವರಿ ಯೋಜನೆಯನ್ನು ರೂಪಿಸಲಾಗಿದೆ.

ಸದರಿ ಯೋಜನೆಯ ರೂ.9.43 ಕೋಟಿ ಅಂದಾಜು ಮೊತ್ತಕ್ಕೆ ದಿನಾಂಕ:27.03.1979ರಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿರುತ್ತದೆ. ಮೂಲ ಯೋಜನೆಯ ವ್ಯಾಪ್ತಿಯ ಪ್ರದೇಶಗಳ ವಿವರಗಳನ್ನು ಅನುಬಂಧದಲ್ಲಿ ಒದಗಿಸಲಾಗಿದೆ.

1980ರಿಂದ 2001ರ ಮಧ್ಯದಲ್ಲಿ ವಾರಾಹಿ ಯೋಜನೆಯಡಿ ಪ್ರಸ್ತಾಪಿತ ಅಣೆಕಟ್ಟೆಯ ಎತ್ತರವನ್ನು ಹೆಚ್ಚಿಸಿ, ವಿದ್ಯುತ್ ಉತ್ಪಾದನೆ ಮಾಡುವ ಸಂಬಂಧ ಯೋಜನೆಯನ್ನು ರೂಪಿಸಲು ಹಾಗೂ ಅಗತ್ಯವಿರುವ ಅರಣ್ಯ ಬಿಡುಗಡೆ ಕುರಿತು ನೀರಾವರಿ ಇಲಾಖೆ, ಕರ್ನಾಟಕ ವಿದ್ಯುತ್ ನಿಗಮ, ಅರಣ್ಯ ಇಲಾಖೆಗಳ ವಿವಿಧ ಹಂತಗಳಲ್ಲಿ ಚರ್ಚೆಯಾಗಿರುತ್ತದೆ.

ಅರಣ್ಯ ಪ್ರದೇಶವನ್ನು ಮಿತಿಗೊಳಿಸಿ, ಯೋಜನೆಯನ್ನು ರೂಪಿಸಲು ಕೇಂದ್ರ ಅರಣ್ಯ ಮತ್ತು ಪರಿಸರ ಇಲಾಖೆ ಹಾಗೂ ನವೆಂಬರ್ 2000ರಲ್ಲಿ ಯೋಜನಾ ಪ್ರದೇಶಕ್ಕೆ ಭೇಟಿ ನೀಡಿದ ಕೇಂದ್ರ ಅರಣ್ಯ ಸಲಹಾ ಸಮಿತಿಯ ಶಿಫಾರಸ್ಸಿನಂತೆ, ವಿದ್ಯುತ್ ಉತ್ಪಾದನೆ ಉದ್ದೇಶವನ್ನು ಕೈಬಿಟ್ಟು, ಪಿಕ್‌ಅಪ್ ಡ್ಯಾಂ ಬದಲಿಗೆ ಡೈವರ್ಷನ್ ವಿಯರ್ ಅನ್ನು ನಿರ್ಮಿಸಲು ನಿರ್ಧರಿಸಲಾಯಿತು.

ವಾರಾಹಿ ಡೈವರ್ಶನ್ ವಿಯರ್ ವಿನ್ಯಾಸವನ್ನು ಅಂತಿಮಗೊಳಿಸುವಲ್ಲಿ, ಕೇಂದ್ರ ಪರಿಸರ ಮತ್ತು ಅರಣ್ಯ ಇಲಾಖೆಯಿಂದ ಹಾಗೂ ರಾಜ್ಯ ಪರಿಸರ ಮತ್ತು ಮಾಲಿನ್ಯ ನಿಯಂತ್ರಣ ಮಂಡಳಿಯೊಂದಿಗೆ ಅನುಮತಿ ಪಡೆಯುವಲ್ಲಿ, 1979ರಿಂದ 2005ರವರೆಗೆ ಪತ್ರ ವ್ಯವಹಾರ ನಡೆಸಲಾಗಿದ್ದು, ಅಂತಿಮವಾಗಿ, ಕೇಂದ್ರ ಪರಿಸರ ಮತ್ತು ಅರಣ್ಯ ಇಲಾಖೆಯಿಂದ ಮೇ 2005ರಲ್ಲಿ ತೀರುವಳಿ ದೊರೆತಿರುತ್ತದೆ.

ಸದರಿ ಯೋಜನೆಯಡಿ ಮೂಲ ಯೋಜನೆಯ ಅಚ್ಚುಕಟ್ಟು ವಿಸ್ತೀರ್ಣದಲ್ಲಿ ಯಾವುದೇ ವ್ಯತ್ಯಾಸವಾಗದಂತೆ ಯೋಜನೆಯನ್ನು ಮಾರ್ಪಡಿಸಲಾಗಿದ್ದು, ರೂ.569.53 ಕೋಟಿ ಅಂದಾಜು ಮೊತ್ತದ ಯೋಜನಾ ವರದಿಗೆ ದಿನಾಂಕ:20.03.2006ರಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಸದರಿ ಯೋಜನೆಯು ಪಶ್ಚಿಮ ಘಟ್ಟದ ಕೆಳಭಾಗ ಮತ್ತು ಕರಾವಳಿ ಪ್ರದೇಶದಲ್ಲಿ ನಿರ್ಮಿಸಲು ಉದ್ದೇಶಿಸಿರುವ ಪ್ರಪ್ರಥಮ ಬೃಹತ್ ನೀರಾವರಿ ಯೋಜನೆಯಾಗಿದ್ದು, ಯೋಜನೆಯನ್ನು ಅನುಷ್ಠಾನಗೊಳಿಸುವಲ್ಲಿ ಹಲವಾರು ತಾಂತ್ರಿಕ ಅಡಚಣೆಗಳು ಎದುರಾಗಿರುತ್ತವೆ. ಪ್ರಸ್ತಾಪಿತ ಯೋಜನೆಯ ಯೋಜಿತ ರೂಪುರೇಷೆಗೆ ಅನುಗುಣವಾಗಿ ಮತ್ತು ನಿಗದಿತ ನೀರಾವರಿ ಸಾಮರ್ಥ್ಯ ಕಲ್ಪಿಸುವಿಕೆಗೆ ಪೂರಕವಾಗಿ ಕಾಲಕಾಲಕ್ಕೆ ತಾಂತ್ರಿಕ ಪರಿಣಿತರ ಸಲಹೆ/ಅಭಿಪ್ರಾಯ ಪಡೆದು, ಸ್ಥಳೀಯ, ತಾಂತ್ರಿಕ ಅವಶ್ಯಕತೆಗನುಗುಣವಾಗಿ ಸಕ್ಷಮ ಪ್ರಾಧಿಕಾರಗಳ ಅನುಮೋದನೆಯೊಂದಿಗೆ ವಿನ್ಯಾಸದಲ್ಲಿ ಬದಲಾವಣೆ ಮಾಡಿ ನಿರ್ವಹಿಸಲಾಗಿದೆ. ಮುಂದುವರೆದು, ದರಪಟ್ಟಿಯ ಪರಿಷ್ಕರಣೆ, ಹೊಸ ಭೂಸ್ವಾಧೀನ ಕಾಯ್ದೆಯನ್ವಯ ಭೂಪರಿಹಾರದಲ್ಲಿನ ಹೆಚ್ಚಳ, ಇತ್ಯಾದಿ ಕಾರಣಗಳಿಂದಾಗಿ. ಯೋಜನಾ ವೆಚ್ಚದಲ್ಲಿ ಹೆಚ್ಚುವರಿಯಾಗಿರುತ್ತದೆ.

ನಿಗಮದ ವರದಿಯಂತೆ, 2023-24ನೇ ಸಾಲಿನ ದರಪಟ್ಟಿಯನ್ವಯ ರೂ.3519.21 ಕೋಟಿ ಅಂದಾಜು ಮೊತ್ತದ ಪರಿಷ್ಕೃತ ಯೋಜನಾ ವರದಿಯನ್ನು ಸಿದ್ಧಪಡಿಸಲಾಗಿದ್ದು, ನಿಗಮ ಹಂತದಲ್ಲಿ ಪರಿಶೀಲನೆಯಲ್ಲಿರುತ್ತದೆ.

ಪ್ರಸ್ತುತ, ಸದರಿ ಯೋಜನೆಯಡಿ ವಾರಾಹಿ ಡೈವರ್ಶನ್ ವಿಯರ್, ವಾರಾಹಿ ಬಲದಂಡೆ ಸಾಮಾನ್ಯ ಕಾಲುವೆ 0.00 ರಿಂದ 18.725 ಕಿ.ಮೀ, ಎಡದಂಡೆ ಕಾಲುವೆ 0.00 ರಿಂದ 43.694 ಕಿ.ಮೀ. ಕಾಮಗಾರಿಗಳು ಪೂರ್ಣಗೊಂಡಿದ್ದು, 5[illegible] ಹೆಕ್ಟೇರ್ ಪ್ರದೇಶಕ್ಕೆ ನೀರಾವರಿ ಸೌಲಭ್ಯವನ್ನು ಒದಗಿಸಲಾಗಿರುತ್ತದೆ. ಯೋಜಿತ ಅಚ್ಚುಕಟ್ಟು 15702 ಹೆಕ್ಟೇರ್ ಪ್ರದೇಶಕ್ಕೆ ಹೋಲಿಸಿದಾಗ ಸುಮಾರು ಶೇ. 40 ರಷ್ಟು ನೀರಾವರಿ ಸಾಮರ್ಥ್ಯವನ್ನು ಸೃಜಿಸಲಾಗಿರುತ್ತದೆ. ವಾರಾಹಿ ಎಡದಂಡೆ ನಾಲಾ ವಿತರಣಾ ನಾಲಾ ಕಾಮಗಾರಿ ಹಾಗೂ ವಾರಾಹಿ ಏತ ನೀರಾವರಿ ಕಾಮಗಾರಿಗಳು ಪ್ರಗತಿಯಲ್ಲಿರುತ್ತದೆ. ಬಲದಂಡೆ ಕಾಲುವೆ ಚೈ.18.725 ಕಿ.ಮೀ. ನಂತರದ ಕಾಮಗಾರಿಯನ್ನು ಇದೂವರೆಗೆ ಪ್ರಾರಂಭಿಸಿರುವುದಿಲ್ಲ.

ವಾರಾಹಿ ಬಲದಂಡೆ ಕಾಲುವೆಯ ಮೂಲ ಸರಪಳಿ 18.419 ಕಿ.ಮೀ. ರಿಂದ 42.73 ಕಿ.ಮೀ. ವರೆಗಿನ ನಾಲಾ ಪಂಕ್ತೀಕರಣವು ಆಳ ಅಗತವನ್ನು ಹೊಂದಿದ್ದು, ರಕ್ಷಿತ ಅರಣ್ಯ ಮತ್ತು ಡೀಮ್ಡ್ ಅರಣ್ಯ ಪ್ರದೇಶಗಳ ಮೂಲಕ ಹಾದುಹೋಗುತ್ತದೆ. ಸದರಿ ನಾಲೆಯಡಿ 1800 ಹೆಕ್ಟೇರ್ ಪ್ರದೇಶಕ್ಕೆ ನೀರಾವರಿ ಸೌಲಭ್ಯ ಒದಗಿಸಲು ಯೋಜಿಸಲಾಗಿರುತ್ತದೆ.

ಅರಣ್ಯ ಭೂಮಿ ಬಿಡುಗಡೆ ಸಮಸ್ಯೆಯನ್ನು ತಪ್ಪಿಸುವ ನಿಟ್ಟಿನಲ್ಲಿ, ಅಚ್ಚುಕಟ್ಟು ಪ್ರದೇಶದಲ್ಲಿ ಯಾವುದೇ ವ್ಯತ್ಯಾಸವಿಲ್ಲದೇ [illegible]ದಂಡೆ ನಾಲಾ ಪಥವನ್ನು ಬದಲಾಯಿಸಿ, ಪರಿಷ್ಕೃತ ಅಂದಾಜು ಪಟ್ಟಿಯನ್ನು ಚಾಲ್ತಿಯಲ್ಲಿರುವ 2023-24ನೇ ಸಾಲಿನ ಏಕರೂಪ ದರಪಟ್ಟಿಯನ್ವಯ ಸಿದ್ಧಪಡಿಸಲಾಗಿದ್ದು, ತಾಂತ್ರಿಕ ಹಾಗೂ ಆರ್ಥಿಕ ಕಾರ್ಯಸಾಧ್ಯತೆ ಕುರಿತು ಕರ್ನಾಟಕ ನೀರಾವರಿ ನಿಗಮದಲ್ಲಿ ಪರಿಶೀಲಿಸಲಾಗುತ್ತಿದೆ.

ವಾರಾಹಿ ಯೋಜನೆಯಡಿ ಎಲ್ಲಾ ಬಾಕಿ ಕಾಮಗಾರಿಗಳನ್ನು ತಾಂತ್ರಿಕ ಸಾಧ್ಯಾಸಾಧ್ಯತೆಗೆ ಅನುಗುಣವಾಗಿ ಮತ್ತು ಯೋಜನೆಗೆ ಅವಶ್ಯವಿರುವ ಅರಣ್ಯ ಭೂಮಿ ಪ್ರಸ್ತಾವನೆಗಳಿಗೆ ತೀರುವಳಿ ಪಡೆದು, ಆದ್ಯತೆ ಮೇರೆಗೆ ಪೂರ್ಣಗೊಳಿಸಲು ಕ್ರಮವಹಿಸಲಾಗುವುದು.

(ಡಿ.ಕೆ. ಶಿವಕುಮಾರ್)
ಉಪ ಮುಖ್ಯಮಂತ್ರಿ

ಜಸಂಇ 176 ಎಂಎಲ್ಎ 2025